ಕರ್ನಾಟಕ ಸರ್ಕಾರ

ಸಂ:ಗ್ರಾಅಪ 206 ಗ್ರಾನೀಸ(4)2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:26.12.2013

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

ಮಾನ್ಯರೆ,

ವಿಷಯ: ಕುಡಿಯುವ ನೀರಿನ ಸಮಸ್ಯೆ ಕುರಿತು ಸಾರ್ವಜನಿಕ ಜಲಸೇವಾ ನಿಯಂತ್ರಣ ಕೇಂದ್ರಗಳಿಗೆ **(Control Room)** ಸಲ್ಲಿಸಿದ ದೂರುಗಳ ವಿಲೇವಾರಿ ಪ್ರಗತಿ ವರದಿ ಮಾಹಿತಿಯನ್ನು **ಇಮೇಲ್** ಮೂಲಕವೇ ಕಳುಹಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:121:ಗ್ರಾನೀಸ(4)2011, ದಿನಾಂಕ:28.9.2011.

—

ಉಲ್ಲೇಖಿತ ಸರ್ಕಾರದ ಸುತ್ತೋಲೆ ಮತ್ತು ತದನಂತರದ ಪತ್ರಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತಂತೆ, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಸ್ಥಾಪಿತವಾಗಿರುವ, ಜಲಸೇವಾ ನಿಯಂತ್ರಣ ಕೊಠಡಿ **(Control Room)**ಗಳಲ್ಲಿ ಸ್ವೀಕರಿಸುತ್ತಿರುವ ದೂರುಗಳ ಬಗ್ಗೆ ಸ್ಪಂದಿಸಿ ತ್ವರಿತವಾಗಿ ಪರಿಹಾರ ಕ್ರಮ ಕೈಗೊಳ್ಳುವಂತೆ ಸರ್ಕಾರದಿಂದ ಸೂಚನೆ ನೀಡಲಾಗಿದೆ. ಈ ಸಂಬಂಧ ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ ಪ್ರತಿ ಶುಕ್ರವಾರ ಸಲ್ಲಿಸುವಂತೆ ನಿರ್ದೇಶನವನ್ನು ಸಹ ನೀಡಲಾಗಿತ್ತು. ಆದರೆ ರಾಜ್ಯದ ಕೆಲವೇ ಜಿಲ್ಲಾ ಪಂಚಾಯತ್‌ಗಳು ಮತ್ತು ಇಂಜಿನಿಯರಿಂಗ್ ವಿಭಾಗಗಳಿಂದ ಮಾತ್ರ ಮಾಹಿತಿಯು ಸಲ್ಲಿಸಲ್ಪಡುತ್ತಿದ್ದು ಇದರಿಂದಾಗಿ ರಾಜ್ಯದ ಒಟ್ಟಾರೆ ಚಿತ್ರಣ ಸರ್ಕಾರಕ್ಕೆ ಲಭ್ಯವಾಗುತ್ತಿಲ್ಲ. ಸದರಿ ಮಾಹಿತಿಯನ್ನು ಲಿಖಿತವಾಗಿ ಅಥವಾ ಫ್ಯಾಕ್ಸ್ ಮುಖೇನ ನೀಡುವ ಅಗತ್ಯವಿಲ್ಲ. e-mail ಮುಖೇನವೇ ಮಾಹಿತಿ ನೀಡಬೇಕು. ತಾಂತ್ರಿಕ ತೊಂದರೆಗಳಿದ್ದಾಗ ಮತ್ತು ಸರ್ಕಾರ ಸೂಚಿಸಿದಾಗ ಮಾತ್ರ ಫ್ಯಾಕ್ಸ್ ಸಂದೇಶ ಕಳುಹಿಸಬೇಕು.

ಆದ್ದರಿಂದ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿರುವ ಜಲಸೇವಾ ನಿಯಂತ್ರಣ ಕೇಂದ್ರಗಳನ್ನು ನಿಯಮಿತವಾಗಿ ತಪಾಸಣೆಗೆ ಒಳಪಡಿಸಿ ಅವುಗಳ ಕಾರ್ಯವೈಖರಿ ಬಗ್ಗೆ ವೈಯಕ್ತಿಕ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಕೋರಿದೆ. ಅಲ್ಲದೇ ಪ್ರತಿವಾರವು ನಿಗದಿತ ನಮೂನೆಯಲ್ಲಿ ಮಾಹಿತಿಯನ್ನು **ಇಮೇಲ್** ಮೂಲಕ ಮಾತ್ರ ತಪ್ಪದೆ ಸಲ್ಲಿಸುವಂತೆ ಸ್ಪಷ್ಟ ಸೂಚನೆಗಳನ್ನು ಸಂಬಂಧಪಟ್ಟ ಕಾರ್ಯಪಾಲಕ ಇಂಜಿನಿಯರ್ / ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೀಡಿ, ಕ್ರೋಢೀಕೃತ ಮಾಹಿತಿಯನ್ನು ಜಿಲ್ಲಾ ಪಂಚಾಯತ್‌ಗಳು ಸಿದ್ದಪಡಿಸಿ ಸರ್ಕಾರಕ್ಕೆ ಪ್ರತಿ ಶುಕ್ರವಾರ **ಇಮೇಲ್** ಮುಖೇನ ಮಾತ್ರ ಸಲ್ಲಿಸಲು ತುರ್ತು ಕ್ರಮಕೈಗೊಳ್ಳಲು ಕೋರಿದೆ. ಈ ಮಾಹಿತಿಯನ್ನು ಪಂಚತಂತ್ರ ವ್ಯವಸ್ಥೆಯಡಿ ಇಂಧೀಕರಿಸಲು ಸಹ ಕ್ರಮವಹಿಸಬಹುದಾಗಿದೆಯೆಂದು ತಿಳಿಸಿದೆ.

ತಮ್ಮ ವಿಶ್ವಾಸಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
**ಇಮೇಲ್ ಇಮೇಲ್: rk3452000@gmail.com**
**ಫೋನ್:22032806, ಫ್ಯಾಕ್ಸ್:22203175**

**ಪ್ರತಿಯನ್ನು:**

1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09 ಇವರಿಗೆ ಅಗತ್ಯ ಕ್ರಮ ವಹಿಸಲು ಕೋರಿದೆ.
2. ರಾಜ್ಯದ ಎಲ್ಲಾ (8) ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ರವರುಗಳ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3. ರಾಜ್ಯದ ಎಲ್ಲಾ (38) ಕಾರ್ಯಪಾಲಕ ಇಂಜಿನಿಯರ್‌ಗಳು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳು ಇವರುಗಳ ಮಾಹಿತಿಗಾಗಿ ಮತ್ತು ಜರೂರು ಕ್ರಮಕ್ಕಾಗಿ ಕಳುಹಿಸಿದೆ.
4. ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮಾಹಿತಿಗಾಗಿ ಮತ್ತು ಜರೂರು ಕ್ರಮಕ್ಕಾಗಿ ಕಳುಹಿಸಿದೆ.
5. ವಿಶೇಷಾಧಿಕಾರಿ, ಕಂಪ್ಯೂಟರ್ ಸೆಲ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬೆಂಗಳೂರು.